# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ–ವಿಭಾಗದ ವಾರ್ಡ್ ಸಂಖ್ಯೆ–152 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 04.09.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ–04–09–2021ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಚುನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರಮ .ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| ೦೧ | ಶ್ರೀ.ಎಸ್.ಪ್ರಭಾಕರ್, ಮುಖ್ಯ ಅಭಿಯಂತರರು (ಪೂರ್ವ)ಬಿ.ಬಿ.ಎಂ.ಪಿ. | 9480685379 |
| ೦೨ | ಶ್ರೀ.ಸತೀಶ್.ಡಿ ಸ.ಇಂ–152 ವಾರ್ಡ್ | 9964310730 |
| ೦೩ | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 963222304 |
| ೦೪ | ಶ್ರೀ. ರಾಜೇಸ್.ಎಮ್ ಎ.ಎಸ್.ಐ | 08022942762 |
| ೦೫ | ಶ್ರೀ.ಕೆ.ಎಸ್ ಶಿವಾನಂದ ಹೆಡ್ ಕಾನಿಸ್ಟೇಬಲ್ | 9980812789 |
| ೦೬ | ಶ್ರೀ.ಹೋಲಿಯಪ್ಪ ಮಾರ್ಷ್‌ಲ್ | 8904349926 |
| ೦೭ | ಶ್ರೀ.ರಾಮ್ ಸಹಾಯಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ | 6360535611 |
| ೦೮ | ಶ್ರೀ ಶರತ್ ಎಂ.ಡಿ. ಬೆಸ್ಕಾಂ | – |
| ೦೯ | ಶ್ರೀ.ಕೃಷ್ಣ.ಸಿ ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ | 9845768405 |
| ೧೦ | ಶ್ರೀ ಎಸ್.ಜಗದೀಶ್, ಸದಸ್ಯರು | 9341320868 |
| ೧೧ | ಶ್ರೀ.ಎನ್.ಲೋಕೇಶ್ ಸದಸ್ಯರು | 9448579144 |
| ೧೨ | ಶ್ರೀ.ಮಂಜುನಾಥ್.ಪಿ ವಾರ್ಡ್ ಮೇಲ್ವಿಚಾರಕರು ಘ.ತ್ಯಾ.ನಿ | 9740903427 |
| ೧೩ | ಶ್ರೀ.ಮುನಿಂದ್ರ ಮೇಲ್ವಿಚಾರಕರು ಘ.ತ್ಯಾ.ನಿ | 9901002067 |
| ೧೪ | ಶ್ರೀ.ಬಿ.ಟಿ ಕೃಷ್ಣಮೂರ್ತಿ ಸದಸ್ಯರು | 9886339044 |
| ೧೫ | ಶ್ರೀ.ಗಂಗಾದ್ರೀ ಮೇಲ್ವಿಚಾರಕರು ಘ.ತ್ಯಾ.ನಿ | 9980225272 |
| ೧೬ | ಶ್ರೀ.ವಿಶ್ವಕುಮಾರ್ ವಾರ್ಡ್ ಸದಸ್ಯರು | 9845371963 |
| ೧೭ | ಶ್ರೀ ಸೈಯದ್ ನಜರುದ್ದೀನ್ ಸದಸ್ಯರು | 9741518897 |

1) ಮಾನ್ಯ ನೋಡಲ್ ಅಧಿಕಾರಿಗಳು ಸಭೆಯನ್ನು ಪ್ರಾರಂಭಿಸುತ್ತಾ, ಮೊದಲನೇಯದಾಗಿ ಕಳೆದ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದ ತಾವರೆಕೆರೆ ಮುಖ್ಯರಸ್ತೆಯಲ್ಲಿನ ಮ್ಯಾನ್‌ಹೋಲ್‌ಗಳ ರಸ್ತೆಮಟ್ಟಕ್ಕೆ ಹೆಚ್ಚಿಸಿರದಿರುವ ಬಗ್ಗೆ ಸೂಕ್ತ ಕಾರಣಗಳನ್ನು ಕೇಳಲಾಗಿ, ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಕೆಲಸ ಪರಿವೀಕ್ಷಕರಾದ ಶ್ರೀ ಕೃಷ್ಣ.ಸಿ ರವರು ಮಾತನಾಡಿ ಪ್ರಸ್ತಾಪಿತ ವಿಷಯವು **Waste Water management Dept(WMM)** ರವರ ಕಾರ್ಯವ್ಯಾಪ್ತಿಗೆ ಒಳಪಡುವುದು ಎಂದು ತಿಳಿಸಿರುತ್ತಾರೆ, ಈ ಸಂಬಂಧ ಮಾನ್ಯ ನೋಡಲ್ ಅಧಿಕಾರಿಗಳು ದೂರವಾಣಿ ಮುಖೇನ ಶ್ರೀ ಇಶಾಂತ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರ ಜೊತೆ ಚರ್ಚಿಸಿದಾಗ, ದಿನಾಂಕ: 08.09.2021ರೊಳಗಾಗಿ ಮ್ಯಾನ್‌ಹೋಲ್‌ಗಳನ್ನು ರಸ್ತೆಮಟ್ಟಕ್ಕೆ ಹೆಚ್ಚಿಸುವ ಕೆಲಸವನ್ನು ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

2) ಸಭೆಯಲ್ಲಿ ಹಾಜರಿದ್ದ ಶ್ರೀ ಸೈಯದ್ ನಜರುದ್ದೀನ್‌ರವರು ಮಾತನಾಡಿ, 6ನೇ ಅಡ್ಡರಸ್ತೆ ಬಾಲಾಜಿನಗರದಲ್ಲಿ ಕಳೆದ 2 ತಿಂಗಳಿಂದ ವಾಹನಗಳ ಕಳ್ಳತನ ಪ್ರಕರಣಗಳು ಹೆಚ್ಚಾಗಿಕಂಡುಬಂದಿದ್ದು, ಕೂಡಲೇ ಇದಕ್ಕೆ ಪರಿಹಾರ ಕಂಡುಕೊಳ್ಳಲು ಸಭೆಗೆ ತಿಳಿಸಿದರು. ಈ ಸಂಬಂಧ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ, ಸಭೆಗೆ ಹಾಜರಿದ್ದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸುತ್ತಾ, ಸೂಕ್ತ ಕಾನೂನಿನ ಕ್ರಮ ಕೈಗೊಳ್ಳಲು ತಿಳಿಸಲಾಯಿತು.

3) ಸಭೆಯಲ್ಲಿ ಹಾಜರಿದ್ದ ಶ್ರೀ ಲೋಕೇಶ್ ರವರು ಮಾತನಾಡಿ 7ನೇ ಅಡ್ಡರಸ್ತೆ, ಚಿಕ್ಕಾಡುಗೊಡಿಯಲ್ಲಿನ ಮನೆಯ ಸಂ 09ರ ಮಾಲೀಕರು ಮನೆಯ ಕೊಳಚೆ/ಅನುಪಯುಕ್ತ ನೀರನ್ನು ರಸ್ತೆಗೆ ಹರಿಸುತ್ತಿರುವುದರಿಂದ ಅಲ್ಲಿನ ಸಾರ್ವಜನಿಕರಿಗೆ ಮತ್ತು ಸವಾರರಿಗೆ ಓಡಾಡಲು ತೊಂದರೆಯಾಗುತ್ತಿದ್ದು ಹಾಗೂ ವಾತವರಣ ಅನೈರ್ಯಮಲ್ಯವಾಗುತ್ತಿರುವುದರಿಂದ ಕೂಡಲೇ ಕ್ರಮ ಕೈಗೊಳ್ಳಲು ಸಭೆಗೆ ತಿಳಿಸಿದರು. ಈ ಸಂಬಂಧ ಶ್ರೀ ಕೃಷ್ಣ ರವರು ಪ್ರಸ್ತಾಪಿತ ವಿಷಯದ ಬಗ್ಗೆ ಮಾತನಾಡಿ, ಸದರಿ ಮನೆಯ ಮಾಲೀಕರು ಕಳೆದ 5 ವರ್ಷಗಳಿಂದ ನೀರಿನ ಮತ್ತು ಒಳಚರಂಡಿ ಸಂಪರ್ಕದ ಬಾಬ್ತಿನ ಮೊತ್ತವನ್ನು ಪಾವತಿಸದಿಲ್ಲದಿರುವುದರಿಂದ ಅವರ ಮನೆಯ ಒಳಚರಂಡಿ ಪೈಪ್‌ಲೈನ್‌ನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದರಿಂದ ಕೊಳಚೆ/ಅನುಪಯುಕ್ತ ನೀರು ರಸ್ತೆಗೆ ಹರಿಸುತ್ತಿರುತ್ತಾರೆ.ಈ ಸಂಬಂಧ ನೋಡಲ್ ಅಧಿಕಾರಿಗಳು ಮತನಾಡಿ ಸದರಿ ವಿಷಯಕ್ಕೆ ಕೂಡಲೇ ಒಂದು ಪರಿಹಾರ ಹುಡುಕಿ ಸಮಸ್ಸೆಯನ್ನು ಇತ್ಯರ್ಥಗೊಳಿಸಬೇಕಾಗಿ ತಿಳಿಸಿರುತ್ತಾರೆ.

4) ಶ್ರೀ ಲೋಕೇಶ್ ರವರು ಮಾತನಾಡಿ ಸೆಂಟಜಾನ್ಸ್ ರಸ್ತೆಯಲ್ಲಿ ರಸ್ತೆ ಬದಿಯ ಎಸ್.ಎಸ್ ರೇಲಿಂಗ್ಸ್ ಎಲ್ಲೆಂದರಲ್ಲಿ ಬಿದ್ದಿದ್ದು, ಇವುಗಳನ್ನು ತಾವರೆಕೆರೆ ರಸ್ತೆಗೆ ಅಳವಡಿಸಲು ಸಭೆಗೆ ತಿಳಿಸಿದರು. ಈ ಸಂಬಂಧ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ, ಶ್ರೀ ರಾಮ್ ಸಹಾಯಕ ಅಭಿಯಂತರರು ರಸ್ತೆ ಮೂಲಭೂತ ಸೌಕರ್ಯ ರವರಿಗೆ ಸದರಿ ಎಸ್.ಎಸ್ ರೇಲಿಂಗ್ಸ್‌ಗಳನ್ನು ತಾವರೆಕೆರೆ ರಸ್ತೆಗೆ ಅಳವಡಿಸಲು ಕ್ರಮವಹಿಸಬೇಕೆಂದು ತಿಳಿಸಿದರು.

5) ಸಭಾಧ್ಯಕ್ಷರು ಮಾತನಾಡಿ, ಮಾರ್ಷಲ್ ರವರಿಗೆ ಮಹಾಮಾರಿ ಕೊರೋನ ರೋಗ ಮೂರನೇ ಅಲೆ ಹರಡದಂತೆ ತಡೆಯಲು ಮುಂಜಾಗ್ರತ ಕ್ರಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಸಮಾರಂಭಗಳು ನಡೆದರೆ ತಪಾಸಣೆ ಮಾಡಿ, ಪರವಾನಿಗೆ ಇಲ್ಲದಿದ್ದರೆ ಪರಿಶೀಲಿಸಿ ಅಂತಹ ಸಮಾರಂಭಗಳನ್ನು ಸ್ಥಗಿತಗೊಳಿಸತಕ್ಕದ್ದು, ಮತ್ತು ಕಡ್ಡಾಯವಾಗಿ ಮಾಸ್ಕ್ ದರಿಸುವುದು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳು ಜಾಗೃತಿ ಮೂಡಿಸಬೇಕು ಹಾಗೂ ಮಾಸ್ಕ ದರಿಸದೇ ಇದ್ದವರಿಗೆ ದಂಡ ವಸೂಲಿ ಮಾಡಲು ಸಭೆಯಲ್ಲಿ ಹಾಜರಿದ್ದು ವಾರ್ಡ್ ಸದಸ್ಯರು ರವರಿಗೆ ಸೂಚಿಸಿದರು.

6) ಮಾನ್ಯ ಸಭಾಧ್ಯಕ್ಷರು ಮಾತನಾಡಿ, ವಾಣಿಜ್ಯ ಘನತ್ಯಾಜ್ಯ ವಿಲೇವಾರಿ ಬಗ್ಗೆ ಉಂಟಾಗಿರುವ ಸಮಸ್ಯಗಳ ಬಗ್ಗೆ ಚರ್ಚಿಸಿದಾಗ, ಸಭೆಯಲ್ಲಿ ಹಾಜರಿದ್ದ ಶ್ರಿ ಓಬಳೇಶ್ ಹಿರಿಯ ಆರೋಗ್ಯ ಪರಿವೀಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ವಾಣಿಜ್ಯ ಘನತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ವಿಲೇವಾರಿ ವಾಗುತ್ತಿರುವ ಬಗ್ಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ ಹಾಲಿ ಯಾವುದೇ ಸಮಸ್ಯೆಗಳಿರುವುದಿಲ್ಲ ಎಂದು ಸಭೆಗೆ ತಿಳಿಸಿದರು.

7) ವಾರ್ಡ್ ವ್ಯಾಪ್ತಿಯ ತಾವರೆಕೆರೆ ಮುಖ್ಯರಸ್ತೆಯಲ್ಲಿ ಈ ಹಿಂದೆ ತೆರವುಗೊಳಿಸಿದ್ದ ಘನತ್ಯಾಜ್ಯ ಬ್ಲಾಕ್‌ಸ್ಪಾಟ್‌ಗಳು ಮತ್ತೇ ಮರು ನಿರ್ಮಾಣವಾಗುತ್ತಿರುವುದು ಕಂಡುಬಂದಿದ್ದು, ಕೂಡಲೇ ಈ ಬಗ್ಗೆ ಸೂಕ್ತ ಕ್ರಮವಹಿಸಲು ಶ್ರೀ ಓಬಳೇಶ್ ಹಿರಿಯ ಆರೋಗ್ಯ ಪರಿವೀಕ್ಷರಿಗೆ ತಿಳಿಸದರು.

8) ಶ್ರೀ.ಲೋಕೇಶ್ ಮಾತನಾಡಿ, ಸೆಂಟಜಾನ್ಸ್ ಪಾದಚಾರಿ ಮಾರ್ಗದಲ್ಲಿ ಕೆಲವು ಬೀದಿ ದೀಪಗಳು ಉರಿಯುತ್ತಿಲ್ಲದಿರುವ ಬಗ್ಗೆ ಸಭೆಗೆ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದು ವಿದ್ಯುತ್‌ವಿಭಾಗದ ಕೆಲಸ ಪರಿವೀಕ್ಷರಿಗೆ ಕೂಡಲೇ ಕ್ರಮವಹಿಸಲು ಸೂಚಿಸಿದರು.

9) ಶ್ರೀ.ಸೈಯದ್ ನಸರುದ್ದಿನ್ ಮಾತನಾಡಿ, 6ನೇ ಅಡ್ಡರಸ್ತೆ ಬಾಲಾಜಿನಗರ ಬೃಹತ್ ನೀರಿಗಾಲುವೆಯಲ್ಲಿ ಅನುಪಯುಕ್ತ ಕಸ ಮತ್ತು ಪ್ಲಾಸ್ಟೀಕ್‌ಗಳನ್ನು ಎಸೆಯುತ್ತಿರುವ ಬಗ್ಗೆ ಸಭೆಗೆ ತಿಳಿಸಿದರು. ಈ ಸಂಬಂಧ ನೋಡಲ್ ಅಧಿಕಾರಿಗಳು ಶ್ರೀ.ಮೊಹಮದ್ ಓಬೇದುಲ್ಲಾ ಶರೀಫ್ ಕಾರ್ಯಪಾಲಕ ಅಭಿಯಂತರರು ಬೃಹತ್ ಮಳೆ ನೀರುಗಾಲುವೆ ಯವರ ಜೊತೆ ದೂರವಾಣಿ ಮುಖೇನ ಚರ್ಚಿಸಿ ಪ್ರಸ್ತಾಪತ ವಿಷಯದ ಬಗ್ಗೆ ಕೂಡಲೇ ಕ್ರಮಕೈಗೊಳ್ಳಲು ತಿಳಿಸಿದರು.

10) ಮಾನ್ಯ ಸಭಾಧ್ಯಕ್ಷರು ವಾರ್ಡ್ ಅಭಿಯಂತರರನ್ನು ಉದ್ದೇಶಿಸಿ ಮತನಾಡಿ, ಕಳೆದ ಸಭೆಯಲ್ಲಿ ಚರ್ಚಿಸಲಾಗಿದ್ದ ವಾರ್ಡ್ ವ್ಯಾಪ್ತಿಯಲ್ಲಿ ಎಷ್ಟು ರಸ್ತೆಗಳಿವೆ, ಎಷ್ಟು ರಸ್ತೆಗಳಲ್ಲಿ ರಸ್ತೆಗುಂಡಿಗಳಿವೆ, ಇವುಗಳಲ್ಲಿ ಎಷ್ಟು ರಸ್ತೆಗುಂಡಿಗಳನ್ನು ಮುಚ್ಚಲಾಗಿದೆ, ಇನ್ನೂಳಿದ ರಸ್ತೆಗುಂಡಿಗಳನ್ನು ಮುಚ್ಚಲು ಯಾವ ಯಾವ ಕ್ರಮಗಳನ್ನು ಜರುಗಿಸಲಾಗಿದೆ ಇದರ ಬಗ್ಗೆ ಸವಿಸ್ತಾರವಾದ ಕ್ರಿಯಾಯೋಜನೆಯನ್ನು ಸಭೆಗೆ ಸಲ್ಲಿಸಿದಾಗ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ ರಸ್ತೆಗುಂಡಿಗಳ ಮಾಹತಿಗಳು ಈ ಕೆಳಕಂಡ ನಮೂನೆಯಲ್ಲಿ ತಯಾರಿಸಿ ಮುಂದಿನ ಸಭೆಗೆ ಸಲ್ಲಿಸಲು ತಿಳಿಸಲಾಯಿತು.

| Ward Name & No | Roads | | Pothole Free Road | | Roads with Poth hole | |
|---|---|---|---|---|---|---|
| | Total Nos | Total Length (in Km) | Total Nos | Total Length (in Km) | Total Nos | Total Length (in Km) |

ಕೊನೆಯದಾಗಿ ಸಭೆ ಅಧ್ಯಕ್ಷರು ಮಾತನಾಡಿ ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್–152 ಎಸ್.ಜಿ.ಪಾಳ್ಯ

S. Prabhakar
(ಶ್ರೀ. ಎಸ್.ಪ್ರಭಾಕರ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್–152 ಎಸ್.ಜಿ.ಪಾಳ್ಯ

ಪ್ರತಿಯನ್ನು:
1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ–ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.